ಕರ್ನಾಟಕ ಸರ್ಕಾರ

**ಕಾಲೇಜು ಶಿಕ್ಷಣ ಇಲಾಖೆ**

ಸಂಖ್ಯೆ: ಕಾಶಿಇ/ಶೈವಿ/10/ಸುತ್ತೋಲೆ/2021-22

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ
ಶೇಷಾದ್ರಿ ರಸ್ತೆ, ಬೆಂಗಳೂರು-560001,
ದಿನಾಂಕ : 07.05.2022.

**ಸುತ್ತೋಲೆ**

ವಿಷಯ : "ದ ವರ್ಡೆ ಬಾಕ್ಸ್" ಯಂತ್ರವನ್ನು ಖರೀದಿಸಲು ಅನುಮತಿ ನೀಡುವ ಬಗ್ಗೆ.

ಉಲ್ಲೇಖ : ಮಾನ್ಯ ಉನ್ನತ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಯವರ ಟಿಪ್ಪಣಿ ಸಂಖ್ಯೆ : ಉಶಿ,ಐಟಿ&ಬಿಟಿ,ವಿ&ತಂ,ಕೌಅಸ/ಆಕಾ/3112/21-22, ದಿನಾಂಕ:23.02.2022.

******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, Verde Box India Go Green LLP ಸಂಸ್ಥೆಯವರು ನಗರಗಳಲ್ಲಿ ಸ್ವಚ್ಛತೆಯನ್ನು ಕಾಪಾಡಲು "ದ ವರ್ಡೆ ಬಾಕ್ಸ್" ಯಂತ್ರವನ್ನು ತಯಾರಿಸಿದ್ದು, ಸದರಿ ಯಂತ್ರವು ಪ್ಲಾಸ್ಟಿಕ್ ಬಾಟಲಿಗಳನ್ನು ಪುಡಿ ಮಾಡುತ್ತದೆ. ಅದರಿಂದ ಟೀಶರ್ಟ್, ಬ್ಯಾಗ್, ಬಕೆಟ್ ಇನ್ನಿತರ ವಸ್ತುಗಳನ್ನು ತಯಾರಿಸಿ ಪುನರ್‌ಬಳಕೆ ಮಾಡಬಹುದಾಗಿರುತ್ತದೆ. ಪ್ಲಾಸ್ಟಿಕ್ ಮುಕ್ತ ಪರಿಸರ ಸ್ನೇಹಿ ವಾತಾವರಣವನ್ನು ನಿರ್ಮಿಸಲು ಸಹಕಾರಿಯಾಗಲಿರುವುದರಿಂದ ಕಾಲೇಜುಗಳಲ್ಲಿ ಈ ಯಂತ್ರವನ್ನು ಅಳವಡಿಸಲು ಅನುಮತಿ ನೀಡುವಂತೆ ಕೋರಿರುತ್ತಾರೆ.

ಈ ಸಂಬಂಧ, ಇಲಾಖಾ ವ್ಯಾಪ್ತಿಯ ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ ಮೇಲ್ಕಂಡ "ದ ವರ್ಡೆ ಬಾಕ್ಸ್" ಯಂತ್ರವು ಅಗತ್ಯವಿದ್ದಲ್ಲಿ ಕಾಲೇಜಿನ ಆವರಣದಲ್ಲಿ ಅಳವಡಿಸುವ ಬಗ್ಗೆ ನಿಯಮಾನುಸಾರ ಪರಿಶೀಲಿಸಿ ಅನುದಾನ ಲಭ್ಯತೆಯ ಮೇರೆಗೆ ಖರೀದಿಸಬಹುದಾಗಿರುತ್ತದೆ.

ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಬೇಕಾದ ವಿಳಾಸ : ಶ್ರೀ ಶೇಖರಪ್ಪ ಓತಗೇರೆ, ವ್ಯವಸ್ಥಾಪಕ ನಿರ್ದೇಶಕರು, Verde Box India Go Green LLP, Green Garden, 3rd Cross, no. 104, Near Hebsur Bhavan, Bannigida stop, Gokul Road, Hubballi. ಮೊ.ಸಂ. -7795510338.

ಕಾಲೇಜು ಶಿಕ್ಷಣ ನಿರ್ದೇಶಕರು

**ಇವರಿಗೆ :**

1. ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ, ಕಲಬುರಗಿ.
2. ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಬೆಂಗಳೂರು – ಇಲಾಖಾ ವೆಬ್‌ಸೈಟ್‌ನಲ್ಲಿ ಅಳವಡಿಸಲು ತಿಳಿಸಲಾಗಿದೆ.
3. ಶ್ರೀ ಶೇಖರಪ್ಪ ಓತಗೇರೆ, ವ್ಯವಸ್ಥಾಪಕ ನಿರ್ದೇಶಕರು, Verde Box India Go Green LLP, Green Garden, 3rd Cross, no. 104, Near Hebsur Bhavan, Bannigida stop, Gokul Road, Hubballi – 580030. (ಮಾಹಿತಿಗಾಗಿ)
4. ಕಛೇರಿ ಪ್ರತಿ.